# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in

ದೂರವಾಣಿ ಸಂಖ್ಯೆ : 080-22212343

ಇ–ಮೇಲ್ ವಿಳಾಸ : director.ahr.kptcl@gmail.com


**ಸಂಖ್ಯೆ: ಕವಿಪ್ರನಿನಿ/ಬಿ16/44953/2023-24** **ದಿನಾಂಕ: 20.11.2024**

## ಅಧಿಸೂಚನೆ

**ವಿಷಯ:** ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ಕೈಗೊಳ್ಳಲಾಗಿರುವ ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್‌ಮ್ಯಾನ್ ಹುದ್ದೆಗಳ ನೇಮಕಾತಿ – ಅಂಚೆ ಚಲನ್ ಪಡೆಯುವ ಮತ್ತು ಅರ್ಜಿ ಶುಲ್ಕ ಪಾವತಿ ದಿನಾಂಕ ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ನಿಗಮದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/44953/2023-24, ದಿನಾಂಕ: 14.10.2024

*****

ನಿಗಮದ ದಿನಾಂಕ: 14.10.2024 ರ ಉದ್ಯೋಗ ಪ್ರಕಟಣೆಗೆ ಅನುಗುಣವಾಗಿ, ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ಕೈಗೊಳ್ಳಲಾಗಿರುವ ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್‌ಮ್ಯಾನ್ ಹುದ್ದೆಗಳ ನೇಮಕಾತಿಗೆ ಅರ್ಜಿ ಸಲ್ಲಿಸಲು 20.11.2024 ಮತ್ತು ಅರ್ಜಿ ಶುಲ್ಕ ಪಾವತಿಸಲು 25.11.2024 ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿರುತ್ತದೆ.

ಆನ್-ಲೈನ್ ಅರ್ಜಿಗೆ ಸಂಬಂಧಿಸಿದಂತೆ ಅರ್ಜಿ ಶುಲ್ಕವನ್ನು ಪಾವತಿಸಲು ಅಂಚೆ ಇಲಾಖೆಯ ಚಲನ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಅರ್ಜಿ ಶುಲ್ಕ ಪಾವತಿಸಬೇಕಿದ್ದು, ಅಂಚೆ ಚಲನ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳುವ ಮುನ್ನ ಅಭ್ಯರ್ಥಿಗಳು e-sign ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿರುತ್ತದೆ. ಆದರೆ, e-sign ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲವೆಂದು ಹಲವಾರು ಅಭ್ಯರ್ಥಿಗಳು ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ, ಅಭ್ಯರ್ಥಿಗಳ ಮನವಿಗಳನ್ನು ಪರಿಗಣಿಸಿ, ಅರ್ಜಿ ಸಲ್ಲಿಕೆಯ ಮೊದಲೆರಡು ಹಂತಗಳನ್ನು ಪೂರ್ಣಗೊಳಿಸಿರುವಂತಹ ಅಭ್ಯರ್ಥಿಗಳಿಗೆ ಸೀಮಿತಗೊಳಿಸಿ, e-sign ಪ್ರಕ್ರಿಯೆ, ಅಂಚೆ ಕಚೇರಿ ಚಲನ್ ಡೌನ್‌ಲೋಡ್ ಮತ್ತು ಅರ್ಜಿ ಶುಲ್ಕ ಪಾವತಿ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ:-

| ವಿವರ | ಅಂತಿಮ ದಿನಾಂಕ | ಷರಾ |
|---|---|---|
| e-sign ಪ್ರಕ್ರಿಯೆ<br>ಅಂಚೆ ಕಚೇರಿ ಚಲನ್ ಡೌನ್ ಲೋಡ್ | 05.12.2024 | ಆನ್-ಲೈನ್ ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕವು 20.11.2024 ಕ್ಕೆ ಮುಕ್ತಾಯವಾಗಲಿದ್ದು, ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. |
| ಅರ್ಜಿ ಶುಲ್ಕ ಪಾವತಿ | 10.12.2024 | |

**ನಿರ್ದೇಶಕರು (ಆಡಳಿತ ಮತ್ತು ಮಾ.ಸಂ),**
**ಕವಿಪ್ರನಿನಿ**